**1ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ನಂಜನಗೂಡು.**

**ಸಿಸಿ ಸಂಖ್ಯೆ 2331/2025**

ಪಿರ್ಯಾದುದಾರರು : **ಬಿಳಿಗೆರೆ ಪೊಲೀಸ್ ಠಾಣೆ, ನಂಜನಗೂಡು**

ವಿರುದ್ಧ

ಆರೋಪಿಗಳು:

**ಅಸೀಫ್ ಬಿನ್ ಷೇಕ್ ಜಲೀಲ್ 45 ವರ್ಷ**
**ವಾಸಃಸಂಃ424, ಕನ್ವಾಲ್ಯಾಬ್ ಪಕ್ಕ, ಸರ್ಕಾರಿ ಉರ್ದು ಶಾಲೆ, ಆಲಹಳ್ಳಿ ಬೆಂಗಳೂರು ದಕ್ಷಿಣ**

*** *** ***

ಆಪಾದನೆ

ಶ್ರೀಮತಿ.ಸರಿತಾ ಕುಮಾರಿ.ಎ.ಎಂ, ಬಿ.ಎ.,ಎಲ್.ಎಲ್.ಬಿ., 1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನಂಜನಗೂಡು ಆದ ನಾನು ಆರೋಪಿತರಾದ ನಿಮ್ಮ ಮೇಲೆ ಆಪಾದಿಸುವುದೇನೆಂದರೆ:-

ದಿನಾಂಕ 11.06.2025 ರಂದು 14:30 ಗಂಟೆಯಲ್ಲಿ ನಂಜನಗೂಡು ತಾಲ್ಲೂಕು ಬಿಳಿಗೆರೆ ಪೊಲೀಸ್ ಠಾಣಾ ವ್ಯಾಪ್ತಿಗೆ ಸೇರಿದ ಸುತ್ತೂರು ಬ್ರಿಡ್ಜ್ ಬಳಿ ಆಲತ್ತೂರು ಗ್ರಾಮದ ಶಿವಕುಮಾರ್ ಮತ್ತು ಪಾಲಿರವರ ಜಮೀನುಗಳ ನಡುವೆ ಪೂರ್ವ-ಪಶ್ಚಿಮವಾಗಿ ಹಾದು ಹೋಗಿರುವ ಸುತ್ತೂರು-ಮೈಸೂರು ರಸ್ತೆಯಲ್ಲಿ ಚಾಸಾ.1 ರವರು ಕೆಎ-09-ಜೆಇ-6856 ಹಿರೋ ಸ್ಪೆಂಡರ್ ಪ್ಲಸ್ ಬೈಕಿನಲ್ಲಿ ಬಂಚಹಳ್ಳಿ ಹುಂಡಿ ಹತ್ತಿರ ಇರುವ ಫುಡ್ ಫ್ಯಾಕ್ಟರಿಗೆ ಕೆಲಸಕ್ಕೆ ಹೋಗಲು ಸೋನಳ್ಳಿ ಗ್ರಾಮದಿಂದ ಹೊರಟು ಸುತ್ತೂರು ಮಾರ್ಗವಾಗಿ ಸುತ್ತೂರು ಬ್ರಿಡ್ಜ್ ನಿಂದ ಸ್ವಲ್ಪ ಮುಂದೆ ಆಲತ್ತೂರು ಗ್ರಾಮದ ಶಿವಕುಮಾರ್ ಜಮೀನಿನ ಬಳಿ ರಸ್ತೆಯಲ್ಲಿ ಎಡಗಡೆ ಹೋಗುತ್ತಿದ್ದಾಗ ಆರೋಪಿತರಾದ ನೀವು ಕೆಎ-51/ಎಕೆ-5346 ಅಶೋಕ

ಲೈಲ್ಯಾಂಡ್ ಲಾರಿಯನ್ನು ಎದುರುಗಡೆಯಿಂದ ಅಂದರೆ, ಆಲತ್ತೂರು ಗ್ರಾಮದ ಕಡೆಯಿಂದ ಅತಿವೇಗವಾಗಿ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬಂದು ಚಾಸಾ.1 ರವರು ಚಾಲನೆ ಮಾಡುತ್ತಿದ್ದ ಬೈಕಿಗೆ ಮುಖಾಮುಖಿಯಾಗಿ ಡಿಕ್ಕಿ ಮಾಡಿ ಅಪಘಾತಪಡಿಸಿರುತ್ತೀರಿ. ಆದ್ದರಿಂದ ಆರೋಪಿಯಾದ ನೀವು ಭಾರತೀಯ ನ್ಯಾಯ ಸಂಹಿತೆಯ ಕಲಂ.281 ರಡಿಯಲ್ಲಿ ದಂಡಿಸಲ್ಪಡುವ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯತೆಯಲ್ಲಿ ಎಸಗಿರುತ್ತೀರೆಂದು ನಿಮ್ಮ ಮೇಲೆ ಆಪಾದಿಸಲಾಗಿದೆ

ಕೊನೆಯದಾಗಿ, ಅದೇ ದಿನ, ಸಮಯ ಹಾಗೂ ಸ್ಥಳದಲ್ಲಿ ಆರೋಪಿತರಾದ ನೀವು ಮಾಡಿದ ಸದರಿ ಅಪಘಾತದಿಂದ ಚಾಸಾ. 1 ರವರು ಕೆಳಕ್ಕೆ ಬಿದ್ದಿದ್ದು, ಚಾಸಾ.1 ರವರಿಗೆ ಬಲಕೈಗೆ ಹಾಗೂ ಬಲಕೈನ ಕಿರುಬೆರಳಿನ ಮೂಳೆ ಮುರಿದು ಸಾಮಾನ್ಯ ಹಾಗೂ ತೀವ್ರ ಸ್ವರೂಪದ  ಗಾಯವನ್ನುಂಟು ಮಾಡಿರುತ್ತೀರಿ. ಆದ್ದರಿಂದ ಆರೋಪಿಯಾದ ನೀವು ಭಾರತೀಯ ನ್ಯಾಯ ಸಂಹಿತೆ ಕಲಂ.125(ಎ ಮತ್ತು ಬಿ) ರಡಿಯಲ್ಲಿ ದಂಡಿಸಲ್ಪಡುವ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯತೆಯಲ್ಲಿ ಎಸಗಿರುತ್ತೀರೆಂದು ನಿಮ್ಮ ಮೇಲೆ ಆಪಾದಿಸಲಾಗಿದೆ.

1. **ಈಗ ನಿಮಗೆ ಓದಿ ಹೇಳಿದ ನಿಮ್ಮ ಮೇಲಿನ ಆರೋಪ ನಿಮಗೆ ತಿಳಿಯಿತೇ?**
   **ಉಃ**

2. **ನಿಮ್ಮ ಮೇಲಿರುವ ಆರೋಪವನ್ನು ಒಪ್ಪಿಕೊಳ್ಳುವಿರಾ? ಅಥವಾ ನಿಮ್ಮ ಪರವಾಗಿ ವಿಚಾರಣೆ ನಡೆಸಲು ಬಯಸುವಿರಾ?**
   **ಉಃ**

(ಮೇಲ್ಕಂಡ ಆರೋಪವನ್ನು ಆರೋಪಿಗೆ ಓದಿ ಹೇಳಿ ಕೇಳಲಾಯಿತು. ಆರೋಪಿ ಕೊಟ್ಟ ಉತ್ತರವನ್ನು ಅವರು ಉತ್ತರಿಸಿದಂತೆಯೇ ಬರೆದುಕೊಂಡಿದ್ದು ಸಂಪೂರ್ಣ ಹಾಗೂ ಸರಿಯಾದ ಮಾಹಿತಿಯನ್ನು ಒಳಗೊಂಡಿದೆ ಎಂದು ದಿನಾಂಕ 25.02.2026 ರಂದು ತೆಗೆದ ನ್ಯಾಯಾಲಯದಲ್ಲಿ ದೃಢೀಕರಿಸಿರುತ್ತೇನೆ.)

**1ನೇ ಹೆಚ್ಚುವರಿ** ಸಿವಿಲ್ ನ್ಯಾಯಾಧೀಶರು ಮತ್ತು ಜೆಎಂಎಫ್‌ಸಿ.,
ನಂಜನಗೂಡು.